ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	431(515)
ವಿಧಾನ ಸಭಾ ಸದಸ್ಯರ ಹೆಸರು	:	ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ	:	05-02-2021
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರ
(ಅ)	ಮಂಡ್ಯ ಜಿಲ್ಲಾ ಪಂಚಾಯತಿಯ ಸಾಮಾನ್ಯ ಸಭೆಯ ಕೋರಂ ಅಭಾವದಿಂದ ಸೆಪ್ಟೆಂಬರ್-2019 ರಿಂದ ನಡೆಯದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
(ಆ)	ಇದುವರೆವಿಗೂ ಸಾಮಾನ್ಯ ಸಭೆ ನಡೆಯದೆ ಜಿಲ್ಲೆಯ ಅಭಿವೃದ್ಧಿ ಕಾರ್ಯಕ್ರಮಗಳು ಸಂಪೂರ್ಣವಾಗಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
(ಇ)	ಹಾಗಾದರೆ, ಜಿಲ್ಲಾ ಪಂಚಾಯಿತಿಯ ಸಮಗ್ರ ಅಭಿವೃದ್ಧಿಗಾಗಿ ಯಾವ ಬದಲಿ ವ್ಯವಸ್ಥೆಯನ್ನು ಮಾಡಲಾಗಿದೆ;	ಮಂಡ್ಯ ಜಿಲ್ಲಾ ಪಂಚಾಯತಿಯ ಸಾಮಾನ್ಯ ಸಭೆಯ ಕೋರಂ ಅಭಾವದಿಂದ 2019ನೇ ಸೆಪ್ಟಂಬರ್ ಮಾಹೆಯಿಂದ ಇದುವರೆವಿಗೂ ನಡೆಸದೆ ಇರುವುದರಿಂದ, ಯಾವುದೇ ಕ್ರಿಯಾಯೋಜನೆಯನ್ನು ಅಥವಾ ಜಿಲ್ಲಾ ಪಂಚಾಯತಿ ಯೋಜನೆಗಳನ್ನು ಅನುಷ್ಠಾನಗೊಳಿಸಿರದ ಕಾರಣ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಸಮಗ್ರ ಅಭಿವೃದ್ಧಿ ಕಾರ್ಯಗಳು ಸಂಪೂರ್ಣವಾಗಿ ಸ್ಥಗಿತವಾಗಿರುವುದಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ರವರು ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತಾರೆ. ಮುಂದುವರೆದು, ಜಿಲ್ಲಾ ಪಂಚಾಯತಿಯ ಸ್ಥಾಯಿ ಸಮಿತಿಗಳು ಅನುಮೋದಿಸಿರುವ ಕ್ರಿಯಾಯೋಜನೆಗಳನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಸರ್ಕಾರವು ಈ ಪ್ರಸ್ತಾವನೆಗಳನ್ನು ಪರಿಶೀಲಿಸಿರುತ್ತದೆ. ವಿವಿಧ ಇಲಾಖೆಗಳ ಯೋಜನೆಗಳಡಿಯಲ್ಲಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸದೆ ಇದ್ದಲ್ಲಿ ಜಿಲ್ಲೆಯ ಅಭಿವೃದ್ಧಿ ಕುಂಠಿತವಾಗುತ್ತದೆ ಎಂದು ಭಾವಿಸಿ, ಮಂಡ್ಯ ಜಿಲ್ಲಾ ಪಂಚಾಯತಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸಲ್ಲಿಸಿದ್ದ ಪ್ರಸ್ತಾವನೆಯಲ್ಲಿ ಕೆಲವೊಂದು ಕಾಮಗಾರಿಗಳನ್ನು ಮಾರ್ಪಾಡು ಮಾಡಿ, ಜಿಲ್ಲಾ ಪಂಚಾಯತಿ ಅಧ್ಯಕ್ಷರು ಸೂಚಿಸಿದ ಕೆಲವೊಂದು ಕಾಮಗಾರಿಗಳನ್ನು ಸೇರಿಸಿದ ಪರಿಷ್ಕೃತ ಕ್ರಿಯಾ ಯೋಜನೆಯನ್ನು ಅನುಷ್ಠಾನ ಮಾಡುವಂತೆ ತಿಳಿಸಿ, ದಿನಾಂಕ: 27-01-2021ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ಇವರಿಗೆ ಪತ್ರವನ್ನು ಸಹ ಕಳುಹಿಸಲಾಗಿರುತ್ತದೆ.

(ಈ)	ಮಂಡ್ಯ ಜಿಲ್ಲಾ ಪಂಚಾಯತಿಯ ಈ ರೀತಿಯ ಆಡಳಿತ ಕಾರ್ಯವ್ಯವಸ್ಥೆ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ?	ಉಪ ಪ್ರಶ್ನೆ ಸಂಖ್ಯೆ(ಇ)ಗೆ ಉತ್ತರಿಸಿರುವುದರಿಂದ, ಸದರಿ ಪ್ರಶ್ನೆಯು ಉದ್ಭವಿಸುವುದಿಲ್ಲ.

ಸಂಖ್ಯೆ:ಗ್ರಾಅಪಂರಾ 46 ಜಿಪಸ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.